# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಡಾ॥ ರಾಜ್‌ಕುಮಾರ್ ವಾರ್ಡ್ ಸಂಖ್ಯೆ: 106

---

ಸಂ: ಸ.ಅ(ವಾ–106)/ಪಿ.ಆರ್/ 02 /2020–21 ದಿನಾಂಕ: 07/11/2020

### ವಾರ್ಡ್ ಸಮಿತಿ ಸಭೆಯ ನಡವಳಿ

ದಿನಾಂಕ: 07–11–2020 ರಂದು ವಾರ್ಡ್ ಸಂಖ್ಯೆ: 106 ಡಾ॥ ರಾಜ್‌ಕುಮಾರ್ ವಾರ್ಡ್ ನಲ್ಲಿ ಶ್ರೀಮತಿ. ಗೀತಾ ಎಲ್. ವಾರ್ಡ್ ನಂ. 106ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿ

**ಹಾಜರಿದ್ದ ಅಧಿಕಾರಿ / ನೌಕರರು:–**

1) ಶ್ರೀಮತಿ. ಗೀತಾ. ಎಲ್, ನೋಡಲ್ ಅಧಿಕಾರಿಗಳು
2) ಶ್ರೀ. ಅರುಣ್‌ಕುಮಾರ್, ಸಹಾಯಕ ಅಭಿಯಂತರರು ಮತ್ತು ಕಾರ್ಯದರ್ಶಿ ವಾರ್ಡ್ ನಂ. 106
3) ನಾಗರಾಜ್. ಕೆ.ಬಿ, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್‌ಬಿ
4) ಕೆ. ಬಾಸ್ಕರ್, ಮೌಲ್ಯಮಾಪಕರು
5) ಮುರಳಿ ಮೋಹನ್, ಕಂದಾಯ ವಸೂಲಿಗಾರರು
6) ಎಸ್.ಆರ್. ಚಂದ್ರಶೇಖರ್, ಕಿರಿಯ ಆರೋಗ್ಯ ಪರಿವೀಕ್ಷಕರು
7) ಅವಿನಾಶ್ ಎಸ್, ಆರೋಗ್ಯ ಪರಿವೀಕ್ಷಕರು
8) ರಾಜೇಶ್, ಆರೋಗ್ಯ ಪರಿವೀಕ್ಷಕರು
9) ಆನಂದ್, ಹೆಚ್.ವಿ, ಸಹಾಯಕ ಅಭಿಯಂತರರು, ಬೆಸ್ಕಾಂ
10) ಭೂದೇವಿ ಲಿಂಕ್ ವರ್ಕರ್,
11) ಜಯಲಕ್ಷ್ಮಿ ಲಿಂಕ್ ವರ್ಕರ್
12) ಸುಧಾ ಎನ್.ಆರ್. ಪಿ.ಎಸ್.ಐ ಮಾಗಡಿ ರಸ್ತೆ ಪೋಲೀಸ್ ಠಾಣೆ
13) ಬಿ. ಉಮೇಶ್, ಕಸ ಸಂಗ್ರಹಣೆ ಗುತ್ತಿಗೆದಾರರು

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು / ಹಾಜರಿದ್ದವರ ಪರಸ್ಪರರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

- ಸ್ವಚ್ಛತೆ ಮತ್ತು ಘನತ್ಯಾಜ್ಯ ವಿಲೇವಾರಿ ಬಗ್ಗೆ:– ಸಭೆಯಲ್ಲಿ 10ನೇ ಎಫ್ ಮುಖ್ಯರಸ್ತೆ, ರಾಜಾಜಿನಗರ 6ನೇ ಬ್ಲಾಕ್ ನಿವಾಸಿಗಳು ಹಾಜರಿದ್ದು, ಕಸ ಸಂಗ್ರಹಣೆಯು ಸಮರ್ಪಕವಾಗಿ ನಡೆಯುತ್ತಿಲ್ಲ ಎಂದು ತಿಳಿಸಿದ್ದು, ಮಾನ್ಯ ಅಧ್ಯಕ್ಷರು ಶ್ರೀ. ಚಂದ್ರಶೇಖರ್ ಕಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಕೂಡಲೇ ಸಮಸ್ಯೆಯನ್ನು ಬಗೆಹರಿಸುವಂತೆ ತಿಳಿಸಿರುತ್ತಾರೆ.
- 10ನೇ ಎಫ್ ಮುಖ್ಯರಸ್ತೆಯಲ್ಲಿ ಬಿ.ಡಬ್ಲ್ಯೂಎಸ್.ಎಸ್.ಬಿ ರವರು ಯುಜಿಡಿ ಕಾಮಗಾರಿ ನಿರ್ವಹಿಸಿದ್ದು, ರಸ್ತೆಯ ಗುಂಡಿಯನ್ನು ಸರಿಯಾಗಿ ಮುಚ್ಚಿರುವುದಿಲ್ಲವೆಂದು ತಿಳಿಸಿದ್ದು, ಮಾನ್ಯ ಅಧ್ಯಕ್ಷರು ಬಿ.ಡಬ್ಲ್ಯೂಎಸ್.ಎಸ್.ಬಿ ಅಧಿಕಾರಿಗಳಿಗೆ ಕೂಡಲೇ ಗುಂಡಿ ಮುಚ್ಚುವಂತೆ ತಿಳಿಸಿರುತ್ತಾರೆ.
- ಮಾಸ್ಕ್ ದರಿಸದ ಸಾರ್ವಜನಿಕರಿಗೆ ದಂಡ ವಿಧಿಸುವುದು ಹಾಗೂ ಮಾಸ್ಕ್ ದರಿಸುವಂತೆ ಮತ್ತು ಸಾಮಾಜಿಕ ಅಂತರ ಕಾಪಾಡಿಕೊಳ್ಳಲು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕೆಲಸವನ್ನು ಲಿಂಕ್ ವರ್ಕರ್‌ಗಳು ಕೈಗೊಳ್ಳಲು ಮಾನ್ಯ ಅಧ್ಯಕ್ಷರು ಸೂಚಿಸಿದರು.
- ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಬರುವ ರಸ್ತೆ ಗುಂಡಿಗಳನ್ನು ಕೂಡಲೇ ಮುಚ್ಚುವಂತೆ ಸಹಾಯಕ ಅಭಿಯಂತರರಿಗೆ ಸೂಚಿಸಿರುತ್ತಾರೆ.

Scanned with CamScanner

- ವಸತಿ ಪ್ರದೇಶಗಳಲ್ಲಿ ಬಳಕೆಯಾಗದೇ ಇರುವ ವಾಹನಗಳನ್ನು ನಿಲ್ಲಿಸಿ ವಾಹನ ಮತ್ತು ಸಾರ್ವಜನಿಕ ಸಂಚಾರಕ್ಕೆ ಅಡಚಣೆಯಾಗಿರುತ್ತದೆ ಎಂದು ಅಗ್ರಹಾರ ನಿವಾಸಿಗಳು ತಿಳಿಸಿದ್ದು, ಈ ಕೂಡಲೇ ಅಂತಹ ವಾಹನಗಳನ್ನು ತೆರವುಗೊಳಿಸಲು ಸೂಕ್ತ ಕ್ರಮಕೈಗೊಳ್ಳಬೇಕೆಂದು ಪಿ.ಎಸ್.ಐ ಮಾಗಡಿ ರಸ್ತೆ ಪೋಲಿಸ್ ಠಾಣೆ ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.
- ಅಂಬೇಡ್ಕರ್ ಕ್ರೀಡಾಂಗಣದ ಸುತ್ತ ಮುತ್ತ ಇರುವ ಡಬ್ರಿಸ್‌ಗಳನ್ನು ಕೂಡಲೇ ತೆರವುಗೊಳಿಸುವಂತೆ ಮಾನ್ಯ ಅಧ್ಯಕ್ಷರು ತಿಳಿಸಿದರು.
- ಬೆಸ್ಕಾಂ ಸಿಬ್ಬಂದಿಯವರು ಇಂಡಸ್ಟ್ರಿಯಲ್ ಟೌನ್‌ನಲ್ಲಿ ರಸ್ತೆಗಳನ್ನು ಅಗೆದು ಕೇಬಲ್ ಅಳವಡಿಕೆ ಕಾಮಗಾರಿಯನ್ನು ನಿರ್ವಹಿಸುತ್ತಿದ್ದು, ಕೂಡಲೇ ರಸ್ತೆ ಗುಂಡಿಯನ್ನು ಮುಚ್ಚಲು ಕ್ರಮವಹಿಸಲು ಸೂಚಿಸಿದರು.

ಅಂತಿಮವಾಗಿ ನೋಡಲ್ ಅಧಿಕಾರಿಗಳು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರು ಕುಂದು ಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಳ್ಳಲು ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸುಲು ಸೂಚಿಸಿ ಮುಂದಿನ ಸಭೆಗೆ ಎಲ್ಲಾ ಅಧಿಕಾರಿ ಸಿಬ್ಬಂದಿಗಳು ಹಾಜರಿರಲು ತಿಳಿಸಿ ಸಭೆಯನ್ನು ಮುಕ್ತಾಯ ಮಾಡಿದರು.

07/11/2020

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ. 106 ಡಾ|| ರಾಜ್‌ಕುಮಾರ್ ವಾರ್ಡ್
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

7/11/2020

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ನಂ. 106 ಡಾ|| ರಾಜ್‌ಕುಮಾರ್ ವಾರ್ಡ್
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:-

1) ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸದೆ.
2) ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸದೆ.
3) ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸದೆ.
4) ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸದೆ.
5) ಮುಖ್ಯಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸದೆ.
6) ಅಧೀಕ್ಷಕ ಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸದೆ.
7) ಕಾರ್ಯಪಾಲಕ ಅಭಿಯಂತರರು (ಗೋವಿಂದರಾಜನಗರ) ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರ ಮಾಹಿತಿಗಾಗಿ ಕಳುಹಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂಎಸ್.ಎಸ್.ಬಿ ರವರ ಮಾಹಿತಿಗಾಗಿ ಕಳುಹಿಸಿದೆ

Scanned with CamScanner